Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

14.04.2025 14.30 hrs

<><*<><>*><>

ಮುಖ್ಯಾಂಶಗಳು

- **ನಾಡಿನೆಲ್ಲೆಡೆ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ; ಮಹಾನ್ ಮಾನವತಾವಾದಿಯನ್ನು ಕೊಂಡಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಜಾತಿಗಣತಿ ವರದಿ ಸ್ವೀಕರಿಸುವ ಕುರಿತಂತೆ ಸರ್ಕಾರ ಇನ್ನೂ ನಿರ್ಧಾರ ಕೈಗೊಂಡಿಲ್ಲ- ಸಚಿವ ಕೆ.ಎನ್.ರಾಜಣ್ಣ ಸ್ಪಷ್ಟನೆ**
- **ಹುಬ್ಬಳ್ಳಿಯಲ್ಲಿ ಹತ್ಯೆಯಾದ ಬಾಲಕಿ ಕುಟುಂಬಕ್ಕೆ ಇನ್ನೂ ಹೆಚ್ಚಿನ ಪರಿಹಾರ ನೀಡಲು ಚಿಂತನೆ- ಸಚಿವ ಸಂತೋಷ್ ಲಾಡ್**
- **ಯಾವುದೇ ಕಾರಣಕ್ಕೂ ಚಾಮರಾಜನಗರ ಗ್ರಾಮಸ್ಥರನ್ನು ಒಕ್ಕಲೆಬ್ಬಿಸುವುದಿಲ್ಲ- ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್**
- **ಹಿರಿಯ ನಟ ಬ್ಯಾಂಕ್ ಜನಾರ್ಧನ್ ಬೆಂಗಳೂರಿನಲ್ಲಿ ವಿಧಿವಶ; ಗಣ್ಯರಿಂದ ಸಂತಾಪ**

<><*<><>*><>

ಮೈಸೂರು ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಪೀಠ ಮತ್ತು ಬೆಂಗಳೂರಿನಲ್ಲೂ ಆಂಧ್ರದ ಮಾದರಿಯನ್ನೂ ಮೀರಿದ ಅಂಬೇಡ್ಕರ್ ಪ್ರತಿಮೆ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಿದ್ದ ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜನ್ಮದಿನೋತ್ಸವ ಉದ್ಘಾಟಿಸಿ ಮಾತನಾಡಿದ ಅವರು ಸಂವಿಧಾನದ ಆಶಯ ಈಡೇರಬೇಕಾದರೆ ಅಸಮಾನತೆ, ಅಸ್ಪೃಶ್ಯತೆ ಅಳಿಯಬೇಕು. ಜಾತಿ ವ್ಯವಸ್ಥೆ ಇರುವವರೆಗೆ ಸಮಾನತೆ ಬರುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಅಂಬೇಡ್ಕರ್ ಇಲ್ಲದೇ ಹೋಗಿದ್ದರೆ ಎಲ್ಲರಿಗೂ ಶಿಕ್ಷಣ ದೊರೆಯುತ್ತಿರಲಿಲ್ಲ ಎಂದು ಹೇಳಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

ಇದೇ ವೇಳೆ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹಾದೇವಪ್ಪ, ಭಾರತದ ೧೪೦ ಕೋಟಿ ಜನರನ್ನು ಅಂಬೇಡ್ಕರ್ ರಚಿಸಿದ ಸಂವಿಧಾನ ರಕ್ಷಣೆ ಮಾಡಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಎಚ್.ಸಿ.ಮಹಾದೇವಪ್ಪ**

ಸಂವಿಧಾನ ಶಿಲ್ಪಿ, ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಜಗತ್ತು ಕಂಡ ಶ್ರೇಷ್ಠ ಆರ್ಥಿಕ ತಜ್ಞ ಮತ್ತು ಸಮಾಜ ಸುಧಾರಕ, ಹೋರಾಟಗಾರರು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಆಚರಿಸಲಾಯಿತು. ಪಾಲಿಕೆ ಕೇಂದ್ರ ಕಛೇರಿ ಆವರಣದಲ್ಲಿ ಮುಖ್ಯ ಆಯುಕ್ತ ಹಾಗೂ ಇತರೆ ಗಣ್ಯರು ಸೇರಿ ಡಾ. ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರ ಮೂಲಕ ಪುಷ್ಪನಮನ ಸಲ್ಲಿಸಿದ್ದಾರೆ. ಅಂಬೇಡ್ಕರ್ ಜಯಂತಿ ಹಿನ್ನೆಲೆಯಲ್ಲಿ ಚಿತ್ರದುರ್ಗ ನಗರದ ಅಂಬೇಡ್ಕರ್ ವೃತ್ತದಲ್ಲಿನ ಅಂಬೇಡ್ಕರ್ ಪುತ್ತಳಿಗೆ ಜಿಲ್ಲಾಧಿಕಾರಿ ವೆಂಕಟೇಶ್ ಮತ್ತು ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಪುಷ್ಪ ನಮನ ಸಲ್ಲಿಸಿದರು. ನಂತರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ ಅಂಬೇಡ್ಕರ್ ಭಾವ ಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು. ದಾವಣಗೆರೆಯಲ್ಲಿ ಅಂಬೇಡ್ಕರ್ ಜಯಂತಿ ಅಂಗವಾಗಿ ಬೃಹತ್ ಮೆರವಣಿಗೆ ನಡೆಯಿತು. ನಗರದ ಜಯದೇವ ವೃತ್ತದಿಂದ ಆರಂಭಗೊಂಡ ಮೆರವಣಿಗೆಗೆ ಹೆಚ್ಚುವರಿ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಚಾಲನೆ ನೀಡಿದರು. ಸಂವಿಧಾನ ಜಾರಿಗೂ ಮುನ್ನ ದೇಶಕ್ಕೆ ಮೀಸಲಾತಿ ಪರಿಚಯಿಸಿದ್ದ ಕೀರ್ತಿ ಕರ್ನಾಟಕ ರಾಜ್ಯಕ್ಕೆ ಸಲ್ಲುತ್ತದೆ ಎಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ. ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೇಲ್ವರ್ಗದವರಿಗೆ ಹೆಚ್ಚಿನ ಪ್ರಧಾನ್ಯತೆ ಇದ್ದ ವೇಳೆ ಹಿಂದುಳಿದವರಿಗೆ ಪ್ರಧಾನ್ಯತೆ ನೀಡಬೇಕಾದ ಅವಶ್ಯಕತೆ ಇತ್ತು. ಈ ವೇಳೆ ಮೈಸೂರು ಸಂಸ್ಥಾನ ಮಿಲ್ಲರ್ ಕಮಿಟಿಯ ಮೂಲಕ ಮೀಸಲಾತಿ ನೀಡಿತು ಎಂದು ಹೇಳಿದ್ದಾರೆ. ಮಂಡ್ಯ ಜಿಲ್ಲಾಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ೧೩೪ ನೇ ಅಂಬೇಡ್ಕರ್ ಜಯಂತಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಸಂವಿಧಾನ ಪೀಠಿಕೆ ಬೋಧಿಸುವ ಮೂಲಕ ಉದ್ಘಾಟಿಸಿದರು.

<><*<><>*><>

ಡಾ.ಬಿ.ಆರ್.ಅಂಬೇಡ್ಕರ್ ದೇಶ ಕಂಡ ಮಹಾನ್ ನಾಯಕ ಹಾಗೂ ಮಾನವತಾವಾದಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಸಂವಿಧಾನ ಶಿಲ್ಪಿ ಡಾ: ಬಿ. ಆರ್.ಅಂಬೇಡ್ಕರ್ ಅವರ ೧೩೪ ನೇ ಜನ್ಮ ದಿನಾಚರಣೆಯ ಅಂಗವಾಗಿ ವಿಧಾನಸೌಧದ ಪೂರ್ವ ದ್ವಾರದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂಬೇಡ್ಕರ್ ಎಲ್ಲರಿಗೂ ಆರ್ಥಿಕ, ಸಾಮಾಜಿಕ, ರಾಜಕೀಯ ಸ್ವಾತಂತ್ರ್ಯ ದೊರಕಿಸಲು ಶ್ರಮಿಸಿದವರು ಎಂದು ಹೇಳಿದ್ದಾರೆ. ಇದೇ ೧೭ ರಂದು ನಡೆಯುವ ಸಚಿವ ಸಂಪುಟದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಜನಗಣತಿಯ ಬಗ್ಗೆ ಚರ್ಚಿಸಲಾಗುವುದು. ಬಳಿಕ ಈ ಕುರಿಂತೆ ಪ್ರತಿಕ್ರಿಯಿಸುವುದಾಗಿ ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಆಕಾಶವಾಣಿಯಲ್ಲಿಂದು ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೪ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ಬೆಂಗಳೂರು ಆಕಾಶವಾಣಿಯ ಮುಖ್ಯಸ್ಥರಾದ ಆರ್.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸಿದರು. ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ಕವಿ ಲಕ್ಷ್ಮೀ ನಾರಾಯಣ ಸ್ವಾಮಿ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕವಿ ಸುಬ್ಬು ಹೊಲೆಯರ್, ನಿವೃತ್ತ ಸಹಾಯಕ ನಿರ್ದೇಶಕಿ ನಿರ್ಮಲಾ ಎಲಿಗಾರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಆಕಾಶವಾಣಿಯ ಪರಿಶಿಷ್ಟ ಜಾತಿ ಪಂಗಡದ ಸಿಬ್ಬಂದಿ ಕ್ಷೇಮಾಭಿವೃದ್ಧಿ ಸಂಸ್ಥೆಯ ಕಾರ್ಯದರ್ಶಿ ಜಿ.ರಘುನಾಥ್ ಹಾಗೂ ಆಕಾಶವಾಣಿಯ ಹಿರಿಯ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಜಾತಿಗಣತಿ ವರದಿಯನ್ನು ಸ್ವೀಕರಿಸುವ ಕುರಿತಂತೆ ಇನ್ನೂ ನಿರ್ಧಾರವಾಗಿಲ್ಲ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾನತಾಡಿದ ಅವರು, ಯಾವುದೇ ಆಕ್ಷೇಪಣೆಗಳಿದ್ದರೆ, ಪರಿಶೀಲಿಸಲಾಗುವುದು ಎಂದು ಹೇಳಿದ್ದಾರೆ. ಇದೇ ೧೭ ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತಂತೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಜಾತಿಗಣತಿ ವರದಿ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಸಂಪುಟ ಸಭೆಯಲ್ಲಿ ಚರ್ಚಿಸಿದ ಬಳಿಕ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಐದು ವರ್ಷದ ಮಗುವಿನ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣ ಇಡೀ ಸಮಾಜ ತಲೆಗಿಸುವ ವಿಚಾರವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಹುಬ್ಬಳ್ಳಿಯ ಕಿಮ್ಸ್ ಶವಾಗಾರಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಹುಬ್ಬಳ್ಳಿಯಲ್ಲಿ ಮಹಿಳೆಯರ ಸುರಕ್ಷಿತೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಹುಬ್ಬಳ್ಳಿ ಧಾರವಾಡದ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸಿಸಿ ಕ್ಯಾಮೆರಾಗಳ ಅಳವಡಿಕೆ ಮಾಡಲಾಗುವುದು ಎಂದು ಹೇಳಿದ್ದಾರೆ. ಸರ್ಕಾರ ಬಾಲಕಿ ಕುಟುಂಬಕ್ಕೆ ಈಗಾಗಲೇ ಪರಿಹಾರ ಘೋಷಣೆ ಮಾಡಿದೆ. ವಸತಿ ಸಚಿವ ಜಮೀರ್ ಅಹ್ಮದ್ ಕೂಡ ವಸತಿ ಇಲಾಖೆಯಿಂದ ಮೃತ ಬಾಲಕಿ ಕುಟುಂಬಸ್ಥರಿಗೆ ಮನೆ ನೀಡುವ ಭರವಸೆ ನೀಡಿದ್ದಾರೆ. ಮುಖ್ಯಮಂತ್ರಿಗಳ ಜೊತೆ ಮಾತನಾಡಿ ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಮನವಿ ಮಾಡಲಾಗವುದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಚಾಮರಾಜನಗರ ಗ್ರಾಮಸ್ಥರಿಗೆ ಮೈಸೂರು ಮಹಾರಾಜರು ಜಮೀನು ಉಡುಗೊರೆಯಾಗಿ ನೀಡಿದ್ದು, ಗ್ರಾಮಸ್ಥರನ್ನು ಒಕ್ಕಲೆಬ್ಬಿಸುವ ಕೆಲಸ ಮಾಡುವುದಿಲ್ಲ ಎಂದು ರಾಜವಂಶಸ್ಥೆ ಪ್ರಮೋದಾ ದೇವಿ ಒಡೆಯರ್ ಸ್ಪಷ್ಟನೆ ನೀಡಿದ್ದಾರೆ. ಚಾಮರಾಜನಗರ ಭೂಮಿ ವಿಚಾರ ಕುರಿತು ಜಿಲ್ಲಾಧಿಕಾರಿಗೆ ಪತ್ರ ಬರೆದಿರುವ

ವಿಚಾರಕ್ಕೆ ಸಂಬಂಧಿಸಿದಂತೆ ಮೈಸೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಪ್ರಮೋದಾದೇವಿ ಒಡೆಯರ್ ಜಿಲ್ಲಾಧಿಕಾರಿಗೆ ೨೦೧೪ರಲ್ಲೇ ಎಲ್ಲಾ ದಾಖಲೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಅರಮನೆ ಹೆಸರಿಗೆ ಜಮೀನು ಬಂದದೆ ಗ್ರಾಮಸ್ಥರು ಆತಂಕಪಡುವುದು ಬೇಡ ಎಂದು ಹೇಳಿದ್ದಾರೆ. ಗ್ರಾಮಸ್ಥರು ತಮ್ಮ ಬಳಿ ಇರುವ ಉಡುಗೊರೆ ದಾಖಲೆಯನ್ನು ಅರಮನೆ ಕಚೇರಿಗೆ ತಲುಪಿಸುವಂತೆ ಅವರು ಮನವಿ ಮಾಡಿದ್ದಾರೆ. ಇದೇ ವೇಳೆ ವನ್ಯಜೀವಿಗಳ ಹಿತದೃಷ್ಟಿಯಿಂದ ಬಂಡೀಪುರ ರಾಷ್ಟ್ರೀಯ ಉದ್ಯಾನವನದಲ್ಲಿ ರಾತ್ರಿ ಸಂಚಾರಕ್ಕೆ ಅವಕಾಶ ಮಾಡಿಕೊಡಬಾರದು ಎಂದು ಒತ್ತಾಯಿಸಿದ್ದಾರೆ.

<><*<><>*><>

ಕನ್ನಡದ ಹಿರಿಯ ನಟ ಬ್ಯಾಂಕ್ ಜನಾರ್ಧನ್ ಇಂದು ನಿಧನ ಹೊಂದಿದ್ದಾರೆ. ಅವರಿಗೆ ೭೫ ವರ್ಷ ವಯಸ್ಸಾಗಿತ್ತು. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ೧೯೪೯ರಲ್ಲಿ ಚಿತ್ರದುರ್ಗದ ಹೊಳಲ್ಕೆರೆಯಲ್ಲಿ ಜನಿಸಿದ್ದ ಬ್ಯಾಂಕ್ ಜನಾರ್ಧನ್, ೧೯೮೫ರಲ್ಲಿ "ಪಿತಾಮಹಾ" ಚಿತ್ರದ ಮೂಲಕ ಚಲನಚಿತ್ರ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದ್ದರು. ಬೆಟ್ಟದ ತಾಯಿ, ಪೊಲೀಸ್ ನ ಹೆಂಡ್ತಿ, ಶ್, ತರ್ಲೆ ನನ್ಮ್ ಗ ಸೇರಿದಂತೆ ಸುಮಾರು ೮೦೦ಕ್ಕೂ ಹೆಚ್ಚು ಚಿತ್ರಗಳಲ್ಲಿ ಹಾಗೂ ಅನೇಕ ಧಾರಾವಾಹಿಗಳಲ್ಲಿ ನಟಿಸಿ ಅತ್ಯುತ್ತಮ ಹಾಸ್ಯ ಕಲಾವಿದರಲ್ಲಿ ಒಬ್ಬರಾಗಿದ್ದರು. ಬ್ಯಾಂಕ್ ಜನಾರ್ಧನ್ ಅವರ ನಿಧನಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಚಿತ್ರರಂಗದ ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

<><*<><>*><>

ಬಿಬಿಎಂಪಿ ಈ ಬಾರಿ ದಾಖಲೆಯ ಆಸ್ತಿ ಸಂಗ್ರಹ ಮಾಡಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿನ ಆಸ್ತಿಗಳಿಂದ ೨೦೨೪-೨೫ನೇ ಸಾಲಿನಲ್ಲಿ ೪ ಸಾವಿರದ ೯೩೦ ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹ ಮಾಡಲಾಗಿದೆ. ೨೦೨೩-೨೪ನೇ ಸಾಲಿಗೆ ಹೋಲಿಸಿದರೆ ೨೦೨೪-೨೫ ನೇ ಸಾಲಿನಲ್ಲಿ ಒಂದು ಸಾವಿರ ಕೋಟಿಗೂ ಅಧಿಕ ಆಸ್ತಿ ತೆರಿಗೆ ಸಂಗ್ರಹಣೆಯಾಗಿದೆ. ೨೦೨೪-೨೫ನೇ ಸಾಲಿನಲ್ಲಿ ಆಸ್ತಿ ತೆರಿಗೆ ಸಂಗ್ರಹವಾಗಿರುವ ವಲಯವಾರು ಅಂಕಿ-ಅಂಶಗಳ ವಿವರಣೆಯ ಪ್ರತಿಯನ್ನು ಲಗತ್ತಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**